**ಕರ್ನಾಟಕ ಸರ್ಕಾರ**

ಸಂಖ್ಯೆ:ಪಿಯು/187/ಸಿಬ್ಬಂದಿ/ಸಿಆರ್-3/ಉ.ನೇ/2015-16(ಭಾಗ-3)

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ, 18ನೇ ಅಡ್ಡರಸ್ತೆ,
ಬೆಂಗಳೂರು-560012,
ದಿನಾಂಕ:05-04-2021.

# ಸುತ್ತೋಲೆ

**ವಿಷಯ:**- ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಆಯ್ಕೆಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ನೈಜತೆ ಪ್ರಮಾಣ ಪತ್ರಗಳನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಕಳುಹಿಸಿರುವ ಬಗ್ಗೆ.

**ಉಲ್ಲೇಖ:**-1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಪಿ 2009, ದಿನಾಂಕ: 15-05-14.

2. ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ಇವರ ಪತ್ರ ಸಂಖ್ಯೆ: ED/KEA/ADMN/CR-54/2014-15, ದಿನಾಂಕ:24-10-2019, 26-10-2019, 21-12-2019 ಹಾಗೂ 21-10-2020.

3. ಈ ಕಚೇರಿ ಸಮಸಂಖ್ಯೆ ಆದೇಶ ದಿನಾಂಕ:20-11-2020, 26-11-2020, 15-12-2020, 29-12-2020, 16-01-2021 ಹಾಗೂ 20-03-2021.

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿದ್ದ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳಿಗೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ರವರು ಉಲ್ಲೇಖ-2ರ ವಿವಿಧ ದಿನಾಂಕಗಳಲ್ಲಿ ಆಯ್ಕೆಪಟ್ಟಿಯನ್ನು ಪ್ರಕಟಿಸಿ ಇಲಾಖೆಗೆ ಸಲ್ಲಿಸಿರುತ್ತದೆ. ಆಯ್ಕೆಯಾದ ಎಲ್ಲಾ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆಗಾಗಿ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಅಭ್ಯರ್ಥಿಗಳ ದಾಖಲಾತಿಗಳನ್ನು ನೈಜತೆಗಾಗಿ ಕಳುಹಿಸಿ, ಅವರಿಂದ ಸ್ವೀಕೃತಗೊಂಡ ನೈಜತೆ ಪ್ರಮಾಣ ಪತ್ರಗಳನ್ನಾಧರಿಸಿ ಉಲ್ಲೇಖ-3ರಂತೆ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಅಭ್ಯರ್ಥಿಗಳು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾದ ನೇಮಕಾತಿ ಆದೇಶಗಳನ್ನು ಡೌನ್ ಲೋಡ್ ಮಾಡಿಕೊಂಡು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವ ಎಲ್ಲಾ ಉಪನ್ಯಾಸಕರುಗಳ ನೈಜತೆ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರುಗಳಿಗೆ ಇ-ಮೇಲ್ ಮೂಲಕ ಕಳುಹಿಸಿಕೊಡಲಾಗಿದ್ದು, ಸಂಬಂಧಿಸಿದ ಉಪನ್ಯಾಸಕರುಗಳ ಸ್ಕ್ಯಾನ್ ಮಾಡಲಾದ ನೈಜತೆ ಪ್ರಮಾಣ ಪತ್ರಗಳನ್ನು ಉಪನ್ಯಾಸಕರುಗಳು ಕಾರ್ಯ ನಿರ್ವಹಿಸುತ್ತಿರುವ ಕಾಲೇಜುಗಳ ಅಧಿಕೃತ ಇ-ಮೇಲ್ ವಿಳಾಸಕ್ಕೆ ಇ-ಮೇಲ್ ಮಾಡಲು ಸೂಚಿಸಿದೆ.

ಈ ಸಂಬಂಧ ಏನಾದರೂ ತಾಂತ್ರಿಕ ತೊಂದರೆಗಳಿದ್ದಲ್ಲಿ ಅಥವಾ ಇದುವರೆವಿಗೂ ನೈಜತೆ ಪ್ರಮಾಣ ಪತ್ರಗಳು ಸ್ವೀಕೃತವಾಗಿರದಿದ್ದಲ್ಲಿ, ಇ-ಆಡಳಿತ ಶಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಗಿರೀಶ್ ವಾಮನರಾವ್ ಟೋಣಪಿ (9886756088)ಇವರನ್ನು ಸಂಪರ್ಕಿಸಬಹುದಾಗಿದೆ.

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

**ರವರಿಗೆ:**

1. ಪದವಿ ಪೂರ್ವ ಸಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪಪೂಶಿಇ, ಬೆಂಗಳೂರು – ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.